ಕನ್ನಡಪ್ರಭ

# ಸುವರ್ಣಸೌಧ ಸಮರ್ಪಕ ನಿರ್ವಹಣೆಗೆ ವಿಪ ಸಭಾಪತಿ ಹೊರಟ್ಟಿ ಸೂಚನೆ



• **ಕನ್ನಡಪ್ರಭ ವಾರ್ತೆ** ಬೆಳಗಾವಿ

ಸುವರ್ಣ ವಿಧಾನಸೌಧದ ನಿರ್ವಹಣೆಯಲ್ಲಿ ಈ ಹಿಂದೆ ಕಂಡುಬಂದಿದ್ದ ಕೆಲವೊಂದು ನ್ಯೂನತೆಗಳನ್ನು ಸರಿಪಡಿಸಲು ನೀಡಲಾಗಿರುವ ನಿರ್ದೇಶನಗಳನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸೂಚನೆ ನೀಡಿದರು.

ವಿಧಾನಸಭೆ ಸಭಾಧ್ಯಕ್ಷರ ಜೊತೆಗೆ ಸುವರ್ಣ ವಿಧಾನಸೌಧಕ್ಕೆ ಮಂಗಳವಾರ ಭೇಟಿ ನೀಡಿ ಸುವರ್ಣಸೌಧದ ನಿರ್ವಹಣೆ ಪರಿಶೀಲಿಸಿ ಮಾತನಾಡಿದ ಅವರು, 2023ರ ಡಿಸೆಂಬರ್‌ನಲ್ಲಿ ಜರುಗಿದ ವಿಧಾನಮಂಡಳದ ಚಳಿಗಾಲ ಅಧಿವೇಶನದ ಸಂದರ್ಭದಲ್ಲಿ ಪರಿಷತ್ ಹಾಗೂ ವಿಧಾನ ಸಭೆಯ ಸಭಾಂಗಣ ನಿರ್ವಹಣೆಯ ಕುರಿತು ನೀಡಲಾಗಿರುವ ನಿರ್ದೇಶನಗಳನ್ನು ಪಾಲಿಸಬೇಕು ಎಂದರು.

**ಅಧಿಕಾರಿಗಳಿಗೆ ಅಭಿನಂದನೆ:** ಕಳೆದ ಡಿಸೆಂಬರನಲ್ಲಿ ನಡೆದ ವಿಧಾನಮಂಡಳ ಅಧಿವೇಶನದ ಯಶಸ್ವಿಗೆ ವಿವಿಧ ಸಮಿತಿಗಳ ಮುಖ್ಯಸ್ಥರು ಹಾಗೂ ಸದಸ್ಯರುಗಳು ಶ್ರಮಿಸುವ ಮೂಲಕ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ ಎಂದು ಸಭಾಪತಿ ಹೊರಟ್ಟಿ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಯಾವುದೇ ಅನಾನುಕೂಲ ಆಗದಂತೆ ಅಧಿವೇಶನವನ್ನು ಅಚ್ಚುಕಟ್ಟಾಗಿ ಹಾಗೂ ಯಶಸ್ವಿಯಾಗಿ ನಡೆಸಿದ್ದು, ಅವರೆಲ್ಲರೂ ಅಭಿನಂದನಾರ್ಹರು ಎಂದರು.

ಬೆಳಗಾವಿಯಲ್ಲಿ ಪ್ರತಿವರ್ಷ ಅಧಿವೇಶನವು ಇದೇ ರೀತಿ ಯಶಸ್ವಿಯಾಗಿ ನಡೆಯಬೇಕು ಎಂಬುದು ನಮ್ಮ ಆಶಯವಾಗಿದೆ ಎಂದು ತಿಳಿಸಿದರು.

ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ.ಖಾದರ್ ಮಾತನಾಡಿ, ಬೆಳಗಾವಿಯಲ್ಲಿ ಇತ್ತೀಚೆಗೆ ನಡೆದ ಅಧಿವೇಶನವು ಅತ್ಯಂತ ಯಶಸ್ವಿಯಾಗಿದ್ದು, ಅತೀ ಹೆಚ್ಚು ಚರ್ಚೆ ನಡೆದಿರುವುದರ ಜತೆಗೆ ಅತೀ ಹೆಚ್ಚು ಮಸೂದೆಗಳು ಕೂಡ ಅಂಗೀಕರಿಸಲಾಗಿರುತ್ತದೆ ಎಂದರು. ಜಿಲ್ಲಾಧಿಕಾರಿ ನಿತೇಶ್ ಪಾಟೀಲ ನೇತೃತ್ವದಲ್ಲಿ ಜಿಲ್ಲಾಡಳಿತ, ಪೊಲೀಸ್ ಸೇರಿದಂತೆ ಸಾವಿರಾರು ಜನರು ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುವ ಮೂಲಕ ಅಧಿವೇಶನ ಯಶಸ್ವಿಗೊಳಿಸಿದ್ದರಿಂದ ಪ್ರತಿಯೊಬ್ಬರಿಗೂ ಅಭಿನಂದನೆ ಸಲ್ಲಿಸಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಕಲಾದಗಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ್ ಕಂಕಣವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ವಿದ್ಯಾವತಿ ಭಜಂತ್ರಿ ಮತ್ತಿತರರು ತಮ್ಮ ಅನಿಸಿಕೆ ಹೇಳಿದರು.

ಕರ್ನಾಟಕ ವಿಧಾನಸಭಾ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ, ವಿಧಾನಸಭೆ ಕಾರ್ಯದರ್ಶಿ ಮಹಾ ಲಕ್ಷ್ಮೀ, ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಎಂಜಿನಿಯರ್ ಅರುಣಕುಮಾರ್‌ಪಾಟೀಲ ಉಪಸ್ಥಿತರಿದ್ದರು.

### ಬೆಳಗಾವಿ ಸುವರ್ಣ ಸೌಧಕ್ಕೆ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಭಾಧ್ಯಕ್ಷ ಯು.ಟಿ. ಖಾದರ್ ಭೇಟಿ

# ಸುವರ್ಣಸೌಧ ಸಮರ್ಪಕ ನಿರ್ವಹಣೆಗೆ ಸೂಚನೆ

**ಬೆಳಗಾವಿ :** ಸುವರ್ಣ ವಿಧಾನಸೌಧದ ನಿರ್ವಹಣೆಯಲ್ಲಿ ಈ ಹಿಂದೆ ಕಂಡುಬಂದಿದ್ದ ಕೆಲವೊಂದು ನ್ಯೂನತೆಗಳನ್ನು ಸರಿಪಡಿಸಲು ನೀಡಲಾಗಿರುವ ನಿರ್ದೇಶನಗಳನ್ನು ಸಮರ್ಪಕ ವಾಗಿ ಜಾರಿಗೊಳಿಸಬೇಕು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸೂಚನೆ ನೀಡಿದರು.

ಪೂರ್ವನಿಗದಿತ ಕಾರ್ಯಕ್ರಮದಂತೆ ಮಂಗಳವಾರ ಭೇಟಿ ನೀಡಿದ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ವಿಧಾನಸಭೆ ಸಭಾಧ್ಯಕ್ಷ ಬೆಳಗಾವಿ ಸುವರ್ಣ ವಿಧಾನಸೌಧದ ನಿರ್ವಹಣೆಯನ್ನು ಪರಿಶೀಲಿಸಿದರು.

2023 ರ ಡಿಸೆಂಬರ್ ತಿಂಗಳಲ್ಲಿ ಜರುಗಿದ ವಿಧಾನಮಂಡಳದ ಚಳಿಗಾಲ ಅಧಿವೇಶನದ ಸಂದರ್ಭದಲ್ಲಿ ಪರಿಷತ್ ಹಾಗೂ ವಿಧಾನಸಭೆಯ ಸಭಾಂಗಣ ನಿರ್ವಹಣೆಯ ಕುರಿತು ನೀಡಲಾಗಿರುವ ನಿರ್ದೇಶನಗಳನ್ನು ಪಾಲಿಸಬೇಕು ಎಂದರು.



ಬೆಳಗಾವಿ ಸುವರ್ಣ ಸೌಧಕ್ಕೆ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಭಾಧ್ಯಕ್ಷ ಯು.ಟಿ. ಖಾದರ್ ಭೇಟಿ ನೀಡಿ ಪರಿಶೀಲಿಸಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಅಧಿಕಾರಿಗಳಿಗೆ ಅಭಿನಂದನೆ..:** ಡಿಸೆಂಬರ್ 2003 ರಲ್ಲಿ ನಡೆದ ವಿಧಾನಮಂಡಳ ಅಧಿವೇಶನದ ಯಶಸ್ವಿಗೆ ವಿವಿಧ ಸಮಿತಿಗಳ ಮುಖ್ಯಸ್ಥರು ಹಾಗೂ ಸದಸ್ಯರುಗಳು ಶ್ರಮಿಸುವ ಮೂಲಕ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ ಎಂದು ಸಭಾಪತಿ ಹೊರಟ್ಟಿ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಯಾವುದೇ ಅನಾನುಕೂಲ ಆಗದಂತೆ ಅಧಿವೇಶನವನ್ನು ಅಚ್ಚುಕಟ್ಟಾಗಿ ಹಾಗೂ ಯಶಸ್ವಿಯಾಗಿ ನಡೆಸಿದ್ದು, ಅವರೆಲ್ಲರೂ ಅಭಿನಂದನಾರ್ಹರು ಎಂದರು.

ಬೆಳಗಾವಿಯಲ್ಲಿ ಪ್ರತಿವರ್ಷ ಅಧಿವೇಶನವು ಇದೇ ರೀತಿ ಯಶಸ್ವಿಯಾಗಿ ನಡೆಯಬೇಕು ಎಂಬುದು ನಮ್ಮ ಆಶಯವಾಗಿದೆ ಎಂದು ತಿಳಿಸಿದರು. ಬೆಳಗಾವಿಯಲ್ಲಿ ಇತ್ತೀಚೆಗೆ ನಡೆದ ಅಧಿವೇಶನವು ಅತ್ಯಂತ ಯಶಸ್ವಿಯಾಗಿದ್ದು, ಅತೀ ಹೆಚ್ಚು ಚರ್ಚೆ ನಡೆದಿರುವುದರ ಜೊತೆಗೆ ಅತೀ ಹೆಚ್ಚು ಮಸೂದೆಗಳು ಕೂಡ ಅಂಗೀಕರಿಸಲಾಗಿರುತ್ತದೆ ಎಂದು ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಹೇಳಿದರು.

ಜಿಲ್ಲಾಧಿಕಾರಿ ನಿತೇಶ ಪಾಟೀಲ ನೇತೃತ್ವದಲ್ಲಿ ಜಿಲ್ಲಾಡಳಿತ, ಪೊಲೀಸ್ ಸೇರಿದಂತೆ ಸಾವಿರಾರು ಜನರು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವ ಮೂಲಕ ಅಧಿವೇಶನ ಯಶಸ್ವಿಗೊಳಿಸಿದ್ದರಿಂದ ಪ್ರತಿಯೊಬ್ಬರಿಗೂ ಅಭಿನಂದನೆ ಸಲ್ಲಿಸಿದರು. ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಕಲಾದಗಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ ಮತ್ತಿತರರು ತಮ್ಮ ಅನಿಸಿಕೆ ಹೇಳಿದರು. ವಿಧಾನಸಭಾ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ, ವಿಧಾನಸಭೆ ಕಾರ್ಯದರ್ಶಿ ಮಹಾಲಕ್ಷ್ಮೀ, ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಎಂಜಿನಿಯರ್ ಅರುಣಕುಮಾರ್ ಪಾಟೀಲ ಉಪಸ್ಥಿತರಿದ್ದರು.